# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆಃ1096/2020

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಚಂದ್ರಪ್ಪ | ಸಿಡಬ್ಲ್ಯೂ-7 |
| ತಂದೆಯ/ಗಂಡನ ಹೆಸರು | - | ತಿಮ್ಮಾಭೋವಿ | ಪಿಡಬ್ಲ್ಯೂ-6 |
| ವಯಸ್ಸು | - | ಸು.56 ವರ್ಷ | ಪ್ರ.ವ.ಬೋ ದಿನಾಂಕಃ16.01.2025 |
| ಉದ್ಯೋಗ | - | ವ್ಯವಸಾಯ | |
| ವಾಸ | - | ಗುಲಗೊಂಡನಹಳ್ಳಿ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ-**

ಸಾಕ್ಷಿಯು ಅಮಾನತ್ತು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಈಗ 5-6 ವರ್ಷದ ಹಿಂದೆ ಹಿರಿಯೂರು ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ನಿಪಿ-7 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ-7 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲುಃ ಮಾನ್ಯ ಎಪಿಪಿಯವರಿಂದಃ-**

ದಿನಾಂಕಃ25.05.2019 ರಂದು ಐಮಂಗಲ ಪೋಲಿಸರು ನನ್ನನ್ನು ಮತ್ತು ಚಾಸಾ-6 ರವರನ್ನು ಬರಮಾಡಿಕೊಂಡು ಚಾಸಾ-15 ರವರು ಹಾಜರು ಪಡಿಸಿದ MH-14-GU-8052 ವಾಹನವನ್ನು ನಮ್ಮ ಸಮಕ್ಷಮ ನಿಪಿ-7 ರಂತೆ ಪಂಚನಾಮೆಯನ್ನು ಬೆ.9.00 ರಿಂದ 9.40 ರವರೆಗೆ

ಜರುಗಿಸಿ ಸದರಿ ವಾಹನವನ್ನು ಅಮಾನತ್ತು ಪಡಿಸಿಕೊಂಡು ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ. ನಿಪಿ–7 ರಲ್ಲಿರುವ ವಿಚಾರಗಳೂ ತಿಳಿದಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ.ಬಿ ಎಲ್ ಎಸ್ ವಕೀಲರಿಂದಃ–**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.